ಕರ್ನಾಟಕ ಸರ್ಕಾರ

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

# ರಾಜ್ಯ ನೀರು ಮತ್ತು ನೈರ್ಮಲ್ಯ ಮಿಷನ್

## ಸಂವಹನ ಮತ್ತು ಸಾಮರ್ಥ್ಯ ಅಭಿವೃದ್ಧಿ ಘಟಕ

ಸಂಖ್ಯೆ : ಗ್ರಾಅಪ/ರಾನೀನೈಮಿ/ನಿಭಾಅ/ಯುಸಿ:10/2012-13/332 ದಿನಾಂಕ :05.10.2013

**ರವರಿಗೆ,** **ನೆನಪೋಲೆ**

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು
ಜಿಲ್ಲಾ ಪಂಚಾಯತ್ ಬೆಳಗಾಂ, ಗುಲ್ಬರ್ಗ&
ಚಿಕ್ಕಬಳ್ಳಾಪುರ ಜಿಲ್ಲೆ.

ಮಾನ್ಯರೇ,

**ವಿಷಯ:** **2012-13ನೇ ಸಾಲಿನ ಲೆಕ್ಕ ಪರಿಶೋಧನಾ ವರದಿ ಮತ್ತು ಹಣಬಳಕೆ ಪ್ರಮಾಣ ಪತ್ರ ಸಲ್ಲಿಸುವ ಕುರಿತಂತೆ.**

**ಉಲ್ಲೇಖ:**
1. ಈ ಕಚೇರಿಯ ಪತ್ರ ಸಮ ಸಂಖ್ಯೆ ದಿನಾಂಕ: 20.05.2013 &10.07.2013
2. ಕೇಂದ್ರ ಸರ್ಕಾರವು ದಿನಾಂಕ:01.04.2012 ರಿಂದ ಹೊರಡಿಸಿರುವ ಪರಿಷ್ಕೃತ ಯೋಜನೆಯ ಮಾರ್ಗಸೂಚಿ.
3. ಈ ಕಚೇರಿಯ ಅ.ಸ.ಪತ್ರ ಸಮ ಸಂಖ್ಯೆ ದಿನಾಂಕ:04.09.2013
4. ಈ ಕಚೇರಿಯ ಪತ್ರ ಸಂ.ರಾನೀನೈಮಿ./ನಿಭಾಅ/51/2012-13 ದಿ.05.09.2013 & 20.09.2013

- - -

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ನಿರ್ಮಲ ಭಾರತ್ ಅಭಿಯಾನ ಕಾರ್ಯಕ್ರಮದಡಿ ಕೇಂದ್ರ ಸರ್ಕಾರವು ದಿನಾಂಕ: 01.04.2012 ರಿಂದ ಅನ್ವಯವಾಗುವಂತೆ ಹೊರಡಿಸಿರುವ ಮಾರ್ಗಸೂಚಿಯಲ್ಲಿರುವ ನಿಗಧಿತ ನಮೂನೆಗಳಂತೆ 2012-13ನೇ ಸಾಲಿನ ಲೆಕ್ಕಪರಿಶೋಧನಾ ವರದಿಯನ್ನು ಉಲ್ಲೇಖ(1,3&4) ರಲ್ಲಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ, ಮುಖ್ಯ ಲೆಕ್ಕಾಧಿಕಾರಿಗಳಿಗೆ ಕಳುಹಿಸಿರುವ ಪತ್ರದನ್ವಯ ಮರುಟಪಾಲಿನಲ್ಲಿ ಸಲ್ಲಿಸಲು ಸೂಚಿಸಲಾಗಿದ್ದು, ಈವರೆಗೆ ಲೆಕ್ಕ ಪರಿಶೋಧನೆ ವರದಿ ಹಾಗೂ ಹಣ ಬಳಕೆ ಪ್ರಮಾಣ ಪತ್ರ ಬಂದಿರುವುದಿಲ್ಲ. ಕೇಂದ್ರ ಸರ್ಕಾರಕ್ಕೆ ಎಲ್ಲಾ ಜಿಲ್ಲೆಗಳ ವರದಿಯನ್ನು ಕ್ರೋಢೀಕರಿಸಿ ಸಲ್ಲಿಸಬೇಕಾಗಿರುತ್ತದೆ ಮತ್ತು 2013-14ನೇ ಸಾಲಿನ 1ನೇ ಕಂತಿನ ಅನುದಾನ ಬಿಡುಗಡೆಗೆ ಲೆಕ್ಕ ಪರಿಶೋಧನಾ ವರದಿಯ ಅಗತ್ಯವಿರುತ್ತದೆ. ಈವರೆಗೆ ವರದಿಯನ್ನು ಸಲ್ಲಿಸದೇ ಇರುವುದರಿಂದ ಕೇಂದ್ರ ಸರ್ಕಾರ ತೀವ್ರವಾಗಿ ಆಕ್ಷೇಪಿಸಲಾಗಿರುತ್ತದೆ ಹಾಗೂ 1ನೇ ಕಂತಿನ ಅನುದಾನ ಬಿಡುಗಡೆಗೆ ಷರತ್ತು ಹಾಕಲಾಗಿರುತ್ತದೆ.

ಈ ನಿಟ್ಟಿನಲ್ಲಿ ತುರ್ತಾಗಿ ಮರು ಟಪಾಲಿನಲ್ಲಿ 2012-13ನೇ ಸಾಲಿನ ಲೆಕ್ಕ ಪರಿಶೋಧನಾ ವರದಿಯನ್ನು ಸಂಬಂಧಪಟ್ಟ ಲೆಕ್ಕ ಅಧೀಕ್ಷಕರು ಖುದ್ದಾಗಿ ಹಾಜರಾಗಿ ಸಲ್ಲಿಸುವಂತೆ ಕೋರಲಾಗಿದೆ. ವರದಿಯಲ್ಲಿ ತಿದ್ದುಪಡಿಗಳಿದ್ದರೆ ಸರಿಪಡಿಸಿ ಸಲ್ಲಿಸಬೇಕಾಗಿರುತ್ತದೆ. ತುರ್ತಾಗಿ ಸಲ್ಲಿಸದೇ ಇದ್ದಲ್ಲಿ ನೀವೇ ಜವಾಬ್ದಾರರಾಗಬೇಕಾಗಿರುತ್ತದೆ ಎಂಬ ಅಂಶವನ್ನು ಮತ್ತೊಮ್ಮೆ ಗಮನಕ್ಕೆ ತರಲಾಗಿದೆ.

ತಮ್ಮ ವಿಶ್ವಾಸಿ,

ಮಿಷನ್ ನಿರ್ದೇಶಕರ ಪರವಾಗಿ,
ರಾ.ನೀ.ನೈ.ಸಂಸ್ಥೆ ಹಾಗೂ ಸರ್ಕಾರದ
ಪದನಿಮಿತ್ತ ಅಪರ ಕಾರ್ಯದರ್ಶಿಗಳು,
ಗ್ರಾ ಅ ಮತ್ತು ಪಂಚಾಯತ್ ರಾಜ್ ಇಲಾಖೆ

**ಪ್ರತಿಯನ್ನು:-**

1. ಪ್ರಧಾನ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಮಾಹಿತಿಗಾಗಿ ಸಲ್ಲಿಸಿದೆ.

2ನೇ ಮಹಡಿ, ಕೆ.ಹೆಚ್.ಬಿ. ಬಿಲ್ಡಿಂಗ್, ಕಾವೇರಿಭವನ, ಬೆಂಗಳೂರು - 560 009.
ದೂರವಾಣಿ ಸಂ/. ಫ್ಯಾಕ್ಸ್ :-22221862 E-mail : wsrdpr@gmail.com